# ಮೈಸೂರು ವಿಶ್ವವಿದ್ಯಾನಿಲಯ

(ನ್ಯಾಕ್ ಸಂಸ್ಥೆಯ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ)

(ಎನ್.ಐ.ಆರ್.ಎಫ್–2024: ರಾಜ್ಯ ಸಾರ್ವಜನಿಕ ವಿಶ್ವವಿದ್ಯಾನಿಲಯ ವರ್ಗದಲ್ಲಿ 19ನೇ ಸ್ಥಾನ, ವಿಶ್ವವಿದ್ಯಾನಿಲಯ ವರ್ಗದಲ್ಲಿ 54ನೇ ಸ್ಥಾನ ಮತ್ತು ಒಟ್ಟಾರೆ ವರ್ಗದಲ್ಲಿ 86ನೇ ಸ್ಥಾನ)


ಸಂಖ್ಯೆ: ವಿಫ8/02/2021–22/86


ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು–570 005


ದಿನಾಂಕ: 04.06.2025

## ಅಧಿಸೂಚನೆ

ವಿಷಯ: ಮೈಸೂರು ವಿಶ್ವವಿದ್ಯಾನಿಲಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿಶೇಷ ಘಟಕದ ವತಿಯಿಂದ 2025–26ನೇ ಸಾಲಿನಲ್ಲಿ 20 (ಇಪ್ಪತ್ತು) ಸಂಶೋಧಕರುಗಳಿಗೆ ಶಿಷ್ಯವೇತನ ನೀಡಲು ಅರ್ಜಿಗಳನ್ನು ಆಹ್ವಾನಿಸಿರುವ ಬಗ್ಗೆ:

*****

ಮೈಸೂರು ವಿಶ್ವವಿದ್ಯಾನಿಲಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿಶೇಷ ಘಟಕದ ವತಿಯಿಂದ ಯುಜಿಸಿ ಮತ್ತು ಮೈಸೂರು ವಿಶ್ವವಿದ್ಯಾನಿಲಯದ ಪಿಹೆಚ್.ಡಿ. ನಿಯಮಾವಳಿಗಳ ಪ್ರಕಾರ ಸಂಶೋಧನಾ ಕಾರ್ಯವನ್ನು ನಿರ್ವಹಿಸುವ ಸಂಶೋಧಕರುಗಳಿಗೆ ಶಿಷ್ಯವೇತನ ನೀಡುವ ಸಲುವಾಗಿ ಮೈಸೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳನ್ನು ಹೊರತುಪಡಿಸಿ ಸ್ನಾತಕೋತ್ತರ ಪದವಿಯಲ್ಲಿ ಶೇ. 50ಕ್ಕಿಂತ ಹೆಚ್ಚು ಅಂಕ ಪಡೆದಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಸಿಂಡಿಕೇಟ್ ಸಭೆಯ ಅನುಮೋದನೆಯನ್ನು ಕಾಯ್ದಿರಿಸಿ 20 (ಇಪ್ಪತ್ತು) ಸಂಶೋಧನಾ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿ ಶುಲ್ಕ ರೂ.100/– (ಒಂದು ನೂರು ರೂಪಾಯಿಗಳು ಮಾತ್ರ) ಗಳನ್ನು ಮೈಸೂರು ವಿಶ್ವವಿದ್ಯಾನಿಲಯದ ಖಾತೆಗೆ ಕ್ರಾಫರ್ಡ್ ಭವನ ಆವರಣದಲ್ಲಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಶಾಖೆಯಲ್ಲಿ ಜಮಾ ಮಾಡಿ ಮೂಲ ಚಲನ್ ಅನ್ನು ಉಪಕುಲಸಚಿವರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿಶೇಷ ಘಟಕ, ಮಹಾರಾಜ ಕಾಲೇಜು ಶತಮಾನೋತ್ಸವ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರಿಗೆ ಸಲ್ಲಿಸಿ ಅರ್ಜಿಗಳನ್ನು ಕಛೇರಿ ಸಮಯ ಬೆಳಿಗ್ಗೆ 10.00 ರಿಂದ ಸಂಜೆ 5.30 ವೇಳೆಯಲ್ಲಿ ಪಡೆಯಬಹುದಾಗಿದೆ. ಭರ್ತಿ ಮಾಡಿದ ಅರ್ಜಿಗಳನ್ನು **ದಿನಾಂಕ: 07.07.2025ರ ಸಂಜೆ 5.30 ಗಂಟೆಯೊಳಗೆ** ಈ ಕಛೇರಿಗೆ ತಲುಪಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ. ತಡವಾಗಿ ಬಂದ ಹಾಗೂ ಅಪೂರ್ಣಗೊಂಡ ಅರ್ಜಿಗಳನ್ನು ಯಾವುದೇ ಸೂಚನೆಯನ್ನು ನೀಡದೇ ತಿರಸ್ಕರಿಸಲಾಗುವುದು.

**ಅರ್ಜಿಯ ಜೊತೆ ಸಲ್ಲಿಸಬೇಕಾದ ದಾಖಲಾತಿಗಳು:**

1. ಶುಲ್ಕ ಪಾವತಿಸಿದ ಮೂಲ ಚಲನ್ 2. ಮಾರ್ಗದರ್ಶಕರ ಒಪ್ಪಿಗೆ ಪತ್ರ 3. ಪಿಹೆಚ್.ಡಿ. ತಾತ್ಕಾಲಿಕ ನೋಂದಣಿ ಪತ್ರ.
4. ಎಲ್ಲಾ ಅಂಕಪಟ್ಟಿಗಳ ಪ್ರತಿಗಳು – SSLC ಯಿಂದ ಸ್ನಾತಕೋತ್ತರ ಪದವಿಯವರೆಗೆ
5. ಜಾತಿ ಮತ್ತು ಆದಾಯ ಪ್ರಮಾಣ ಪತ್ರ (ರೂ.2.5 ಲಕ್ಷ ಒಳಗಿರಬೇಕು)
6. ಅರ್ಜಿಯನ್ನು ಸಲ್ಲಿಸುವ ಅಭ್ಯರ್ಥಿಗಳ ಮಾರ್ಗದರ್ಶಕರು ಮೈಸೂರು ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟಿರಬೇಕು. (ಮಾನಸಗಂಗೋತ್ರಿಯ ಅಧ್ಯಯನ ವಿಭಾಗಗಳು ಮತ್ತು ಘಟಕ ಕಾಲೇಜುಗಳು)
7. ಹೈದ್ರಾಬಾದ್ ಕರ್ನಾಟಕ, ವಿಶೇಷ ಚೇತನರು ಹಾಗೂ ತೃತೀಯ ಲಿಂಗಗಳ ಅಡಿಯಲ್ಲಿ ಮೀಸಲಾತಿ ಕೋರಿದಲ್ಲಿ ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿದ ಪೂರಕ ದಾಖಲೆಗಳನ್ನು ಲಗತ್ತಿಸುವುದು
8. ಸಂಶೋಧನಾ ವಿದ್ಯಾರ್ಥಿಗಳನ್ನು ವಿಭಾಗವಾರು, ವಿದ್ಯಾರ್ಹತೆಯ ಜೇಷ್ಠತೆ (Merit) ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ. ಇದರ ಅಂತಿಮ ತೀರ್ಮಾನವು ವಿಶ್ವವಿದ್ಯಾನಿಲಯದಾಗಿರುತ್ತದೆ.

ಮೇಲಿನಂತೆ ಅರ್ಜಿ ಮತ್ತು ದಾಖಲಾತಿಗಳನ್ನು ಮಾರ್ಗದರ್ಶಕರು ಹಾಗೂ ವಿಭಾಗದ ಅಧ್ಯಕ್ಷರು/ನಿರ್ದೇಶಕರು/ಪ್ರಾಂಶುಪಾಲರ ಮುಖಾಂತರ "ಉಪಕುಲಸಚಿವರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿಶೇಷ ಘಟಕ"ಕ್ಕೆ ಸಲ್ಲಿಸತಕ್ಕದ್ದು.

ಕುಲಸಚಿವ
4/6/2025

ಗೆ.

1. ಅಧ್ಯಕ್ಷರು/ನಿರ್ದೇಶಕರು– ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು/ಸಂಸ್ಥೆಗಳು, ಮಾನಸಗಂಗೋತ್ರಿ, ಮೈಸೂರು.
2. ಪ್ರಾಂಶುಪಾಲರು, ಮಹಾರಾಜ/ಯುವರಾಜ/ಲಲಿತ ಕಲಾ ಕಾಲೇಜು/ಸಂಜೆ ಕಾಲೇಜು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
3. ಆಡಳಿತಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮಾನಸಗಂಗೋತ್ರಿ, ಮೈಸೂರು
4. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ನಿರ್ದೇಶನಾಲಯ, ಮಾನಸಗಂಗೋತ್ರಿ, ಮೈಸೂರು.
5. ಜಿಲ್ಲಾ ವಾರ್ತಾ ಮತ್ತು ಪ್ರಚಾರಾಧಿಕಾರಿಗಳು, ವಾರ್ತಾ ಭವನ, ಮೈಸೂರು ಜಿಲ್ಲೆ, ಮೈಸೂರು– ಇವರಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಈ ಪ್ರಕಟಣೆಯನ್ನು ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಬೇಕೆಂದು ಕೋರಲಾಗಿದೆ.
6. ನಿರ್ದೇಶಕರು, ಗಣಕ ಕೇಂದ್ರ, ಮೈಸೂರು–ಅಂತರ್ಜಾಲದಲ್ಲಿ ಪ್ರಕಟಿಸಬೇಕೆಂದು ಕೋರಲಾಗಿದೆ
7. ಮಾನ್ಯ ಕುಲಪತಿಗಳ/ಕುಲಸಚಿವರ/ಕುಲಸಚಿವರ(ಮೌಲ್ಯಮಾಪನ) ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, [illegible]